ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/01/ಇಸಿಎಸ್(2)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 16-07-2018

## ಜ್ಞಾಪನ

ವಿಷಯ: 2018 ರ ಮೇ/ಜೂನ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳಿಂದ ಜರುಗಿದ ಮಾಲ್ ಪ್ರಾಕ್ಟೀಸ್ ಪ್ರಕರಣಗಳು/ ಲೋಪದೋಷ ಪ್ರಕರಣಗಳ ವಿಚಾರಣೆ ನಡೆಸುವ ಕುರಿತು.

ಉಲ್ಲೇಖ: ಈ ಕಛೇರಿ ಜ್ಞಾಪನ ಸಂ: ಬಿಟಿಇ/01/ಇಸಿಎಸ್(2)/2018 ದಿ:06-07-2018

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ 2018 ರ ಮೇ/ಜೂನ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಮಾಲ್ ಪ್ರಾಕ್ಟೀಸ್ ಪ್ರಕರಣಗಳಲ್ಲಿ ಭಾಗಿಯಾಗಿರುವ / ಲೋಪದೋಷ ಎಸಗಿರುವ ಬಗ್ಗೆ ತಾಂತ್ರಿಕ ಪರೀಕ್ಷಾ ಮಂಡಳಿಯು ದಿನಾಂಕ:11-07-2018 ರಿಂದ 17-07-2018 ರವರೆಗೆ ವಿದ್ಯಾರ್ಥಿಗಳನ್ನು ವಿಚಾರಣೆಗೊಳಪಡಿಸಲು ಕ್ರಮಕೈಗೊಂಡಿತ್ತು. ಆದಾಗ್ಯೂ ಕೆಲ ವಿದ್ಯಾರ್ಥಿಗಳು ವಿಚಾರಣೆಗೆ ಗೈರು ಹಾಜರಾಗಿರುವುದು ಕಂಡು ಬಂದಿರುತ್ತದೆ. ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಸದರಿ ವಿಚಾರಣೆಗೆ ಗೈರುಹಾಜರಾದ ವಿದ್ಯಾರ್ಥಿಗಳ ವಿಚಾರಣೆಯನ್ನು **ದಿನಾಂಕ: 20-07-2018** ರಂದು ಅಂತಿಮವಾಗಿ ನಡೆಸಲು ತೀರ್ಮಾನಿಸಲಾಗಿದ್ದು, ವಿದ್ಯಾರ್ಥಿಗಳು ಈ ವಿಚಾರಣೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ಹಾಗೊಂದು ವೇಳೆ ಗೈರುಹಾಜರಾದಲ್ಲಿ ಮುಂದೆ ಯಾವುದೇ ವಿಚಾರಣೆ ನಡೆಸದೆ ಪ್ರಕರಣದ ಬಗ್ಗೆ ಏಕಪಕ್ಷೀಯವಾಗಿ ತೀರ್ಮಾನ ಕೈಗೊಳ್ಳಲಾಗುವುದೆಂದು ತಿಳಿಸಿದೆ ಹಾಗೂ ಈ ಮಾಹಿತಿಯನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-1

ಇವರಿಗೆ,

ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

2) ಗಣಕ ಕೇಂದ್ರ – ವೆಬ್‌ಪೋರ್ಟಲ್ ನಲ್ಲಿ ಮತ್ತು www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

3) ಕಾರ್ಯದರ್ಶಿಯವರ ಆಪ್ತ ಶಾಖೆ